**CC No.659/2014**
**PW.08**

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೊಡ್ಡಬಳ್ಳಾಪುರ**

**ಸಿಸಿ ನಂ 659/2014**

ಸಿ.ಡಬ್ಲೂಃ **13** ಪಿಡಬ್ಲೂಃ **08**

| | |
|---|---|
| ಸಾಕ್ಷಿದಾರರ ಹೆಸರು | ಡಿ. ಆರ್ ನಾಗರಾಜ್ |
| ತಂದೆಯ ಹೆಸರು | ಲೇಟ್ ದೇವಯ್ಯ |
| ವಯಸ್ಸು | 59 ವರ್ಷ |
| ಉದ್ಯೋಗ | ಪೋಲಿಸ್ ಇನ್ಸ್‌ಪೆಕ್ಟರ್ |
| ವಾಸ ಸ್ಥಳ | ಬಾಗೇಪಲ್ಲಿ |

**ದಿನಾಂಕಃ 01.12.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆ** ಮಾನ್ಯ ಸಹಾಯಕ ಅಭಿಯೋಜಕ **ರವರಿಂದ**

ದಿಃ 19-03-2012 ರಂದು ಕಡತವನ್ನು ಚಾಸಾ-12 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದುದಾರರು ತೋರಿಸಿದ ಸ್ಥಳವನ್ನು ಪಂಚನಾಮೆ ಮಾಡಿರುತ್ತೇನೆ. ಸದರಿ ಸ್ಥಳದಲ್ಲಿ ಪಿರ್ಯಾದುದಾರರು ಆರೋಪಿಗಳು ಕೃತ್ಯಕ್ಕೆ ಬಳಸಿದ 2 ದೊಣ್ಣೆಗಳನ್ನು ಮತ್ತು ಕಲ್ಲನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಅದನ್ನು ಮು.ಮಾ-1 ರಿಂದ 3 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಅಮಾನತ್ತುಪಡಿಸಿದ ಮು.ಮಾ ಗಳನ್ನು ಮಾಲುಪಟ್ಟಿ ಸಂಖ್ಯೆ 30/12 ರಲ್ಲಿ ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮು.ಮಾ.ಗಳನ್ನು ನೋಡಿ ಗುರುತಿಸಿರುತ್ತಾರೆ. ಚಾಸಾ-2 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಚಾಸಾ-1 ರಿಂದ 3 ರವರ ಗಾಯದ ಪ್ರಮಾಣ ಪತ್ರಗಳನ್ನು ದೊಡ್ಡಬಳ್ಳಾಪುರ ಸರ್ಕಾರಿ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರಗಳು ಈಗಾಗಲೇ ನಿಪಿ-5 ರಿಂದ 7 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5(ಬಿ), 6(ಬಿ) ಮತ್ತು 7(ಬಿ) ಎಂದು ಗುರುತಿಸಲಾಯಿತು.

**CC No.659/2014**
**PW.08**

ಕೃತ್ಯ ನಡೆದ ಸ್ಥಳದ ಆರ್.ಟಿ.ಸಿ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿಗಳ ವಿರುದ್ಧ ಆರೋಪ ಸಾಬೀತಾದ ಕಾರಣ ದೋಷಾರೋಪಣ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

**ಪಾಟೀ ಸವಾಲುಃ** ಆರೋಪಿಗಳ ಪರ ವಕೀಲರು ಹಾಜರಿದ್ದು, ಸೂಕ್ತ ಕಾರಣ ನೀಡದ ಕಾರಣ ಪಾಟೀಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಇದೆ**

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ,**
**ದೊಡ್ಡಬಳ್ಳಾಪುರ .**